# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority


ಸಂಖ್ಯೆ : ಬೆಂಅಪ್ರಾ/ನಯೋಸ/PRL-18/23-24/118 /2024-25 ದಿನಾಂಕ :
No. Date : 23/04/2024

E-Office No.38200

## ಕಾರ್ಯಾದೇಶ

[ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17(2-A) ರಡಿಯಲ್ಲಿ]

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಶ್ರೀ.ಪ್ರದೀಪ್ ಕೃಷ್ಣಪ್ಪ ಬಿನ್ ಎಂ. ಕೃಷ್ಣಪ್ಪ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ:
1. ಅರ್ಜಿದಾರರ ಮನವಿ ದಿನಾಂಕ 04.09.2023
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 1.3.1/2024, ದಿನಾಂಕ 25.01.2024.
3. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-18/2758/2023-24, ದಿನಾಂಕ 28.02.2024
4. ಕೆನರಾ ಬ್ಯಾಂಕ್ ಚಲನ್ ನಂ. GN24028943, ದಿನಾಂಕ 29.02.2024
5. ಈ ಕಛೇರಿ ಅ.ಟಿ.ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-18/2980/2023-24, ದಿನಾಂಕ 22.03.2024.
6. ಅಧಿಕ ಜಿಲ್ಲಾ ನೊಂದಣಾಧಿಕಾರಿ, ಬೆಂಗಳೂರು ನಗರ ಜಿಲ್ಲೆ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ BDA-1-00011-2024-25 ದಿನಾಂಕ 02.04.2024

********

ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಅನುಮೋದಿಸಲು ಶ್ರೀ.ಪ್ರದೀಪ್ ಕೃಷ್ಣಪ್ಪ ಬಿನ್ ಎಂ. ಕೃಷ್ಣಪ್ಪ ರವರು ಉಲ್ಲೇಖ [1] ರ ಅರ್ಜಿಯಲ್ಲಿ ಕೋರಿರುತ್ತಾರೆ.

ಉಲ್ಲೇಖ (2) ರಂತೆ ದಿನಾಂಕ 25.01.2024 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 1.3.1/2024 ರ ನಡವಳಿಕೆಯಲ್ಲಿ ಚರ್ಚೆಯ ನಂತರ "ಸಲ್ಲಿಸಿರುವ ವಸತಿ ವಿನ್ಯಾಸ ನಕ್ಷೆಯು ಅನುಮೋದಿತ ಮಹಾಯೋಜನೆ RMP-2015 ರ ವಲಯ ನಿಯಮಾವಳಿಗಳಿಗೆ



Scanned with OKEN Scanner

ಅನುಗುಣವಾಗಿರುವುದನ್ನು ಸಭೆಯು ಗಮನಿಸಿತು. ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸ.ನಂ.13/1 ರಲ್ಲಿ 2ಎ-05ಗುಂ (0ಎ-01ಗುಂ ಖರಾಬು ಹೊರತುಪಡಿಸಿ) ಸ.ನಂ.13/2 ರಲ್ಲಿ 2ಎ-20ಗುಂ, ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು Demarcation & Development ಉದ್ದೇಶಕ್ಕೆ ಸ.ನಂ.13/1 ರ ದಾಖಲೆಗಳಲ್ಲಿ ನಮೂದಿಸಿರುವ 0ಎ-01ಗುಂ 'ಬಿ' ಖರಾಬು ಕುರಿತು ಭೂದಾಖಲೆಗಳ ಇಲಾಖೆ ವತಿಯಿಂದ ಸ್ಪಷ್ಟೀಕರಣೆ ಪಡೆಯುವ ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಟ್ಟು, ಅನುಮೋದಿಸಲು ತೀರ್ಮಾನಿಸಲಾಯಿತು. ಈ ಕುರಿತು ನಿಯಮಾನುಸಾರ ಮುಂದಿನ ಕ್ರಮವಹಿಸುವ ಅಧಿಕಾರವನ್ನು ಆಯುಕ್ತರಿಗೆ ಪ್ರತ್ಯಾಯೋಜಿಸಲು ನಿರ್ಣಯಿಸಲಾಗಿರುತ್ತದೆ."

ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ತಾತ್ಕಾಲಿಕ ವಿನ್ಯಾಸ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ವಿವಿಧ ಶುಲ್ಕಗಳ ಬಾಬ್ತು ₹.31,94,510/- [₹ ಮೂವತ್ತೊಂದು ಲಕ್ಷದ ತೊಂಭತ್ತನಾಲ್ಕು ಸಾವಿರದ ಐದು ನೂರ ಹತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ಉಲ್ಲೇಖ [3] ರಲ್ಲಿ ತಿಳಿಸಲಾಗಿತ್ತು. ಅದರಂತೆ ದಿನಾಂಕ 29.02.2024 ರಂದು ಶುಲ್ಕ ಮೊತ್ತ ₹.31,94,510/- [₹ ಮೂವತ್ತೊಂದು ಲಕ್ಷದ ತೊಂಭತ್ತನಾಲ್ಕು ಸಾವಿರದ ಐದು ನೂರ ಹತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ಶಾಖೆಯಲ್ಲಿ ಪಾವತಿಸಿರುವ ಚಲನ್ ನಂ. GN24028943 ನ್ನು ಉಲ್ಲೇಖ [4] ರ ಪತ್ರದಲ್ಲಿ ಅಡಕಗೊಳಿಸಿ ಸಲ್ಲಿಸಿರುತ್ತಾರೆ. ಸದರಿ ಮೊತ್ತವು ಪ್ರಾಧಿಕಾರದ ಖಾತೆಗೆ ಜಮೆ ಆಗಿರುವ ಬಗ್ಗೆ ಪ್ರಾಧಿಕಾರದ ಆರ್ಥಿಕ ಸದಸ್ಯರ ವಿಭಾಗದಿಂದ ದಿನಾಂಕ 06.03.2024 ರ ಅನೌಪಚಾರಿಕ ಟಿಪ್ಪಣಿಯೊಂದಿಗೆ ದಿನಾಂಕ 29.02.2024 ರಂದು ನೀಡಿರುವ ಬ್ಯಾಂಕ್ ಸ್ಟೇಟ್ ಮೆಂಟ್ ನೊಂದಿಗೆ ಪರಿಶೀಲಿಸಿಕೊಂಡು ಜಮಾ ಆಗಿರುವ ಕುರಿತು ಖಚಿತಪಡಿಸಿಕೊಳ್ಳಲಾಗಿದೆ.

ತಾತ್ಕಾಲಿಕ ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ ಮತ್ತು ರಸ್ತೆ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸುವಂತೆ ಅರ್ಜಿದಾರರಿಗೆ ಮತ್ತು ಸದರಿ ಪ್ರದೇಶಗಳನ್ನು ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು [ದಕ್ಷಿಣ ವಿಭಾಗ], ಇವರಿಗೆ ಉಲ್ಲೇಖ [5 ] ರ ಈ ಕಛೇರಿಯ ಅನೌಪಚಾರಿಕ ಟಿಪ್ಪಣಿಯಲ್ಲಿ ತಿಳಿಸಲಾಗಿತ್ತು.

ತಾತ್ಕಾಲಿಕ ಕರಡು ವಸತಿ ವಿನ್ಯಾಸ ನಕ್ಷೆಯಲ್ಲಿನ ಉದ್ಯಾನವನ / ಬಯಲು ಜಾಗ, ಪಬ್ಲಿಕ್ ಯುಟಿಲಿಟಿ ಮತ್ತು ರಸ್ತೆ ಪ್ರದೇಶಗಳನ್ನು ದಿನಾಂಕ 02.04.2024 ರಂದು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಉಲ್ಲೇಖ [6] ರಂತೆ ಹಸ್ತಾಂತರಿಸಿಕೊಂಡಿದ್ದು, ಈ ಸಂಬಂಧ ಅಭಿಯಂತರ ಸದಸ್ಯರ ವಿಭಾಗದಿಂದ ದಿನಾಂಕ 15.04.2024 ರ ಟಿಪ್ಪಣಿಯೊಂದಿಗೆ ಪರಿತ್ಯಾಜನಾ ಪತ್ರವನ್ನು ಅಡಕಗೊಳಿಸಿ ಕಳುಹಿಸಿರುತ್ತಾರೆ.



Scanned with OKEN Scanner

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಶ್ರೀ.ಪ್ರದೀಪ್ ಕೃಷ್ಣಪ್ಪ ಬಿನ್ ಎಂ. ಕೃಷ್ಣಪ್ಪ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17 (2-A) ರ ಅಡಿಯಲ್ಲಿ Demarcation & Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದನೆ ನೀಡಲಾಗಿದೆ.

| | |
|---|---|
| 1. | ರೇರಾ ಅಧಿನಿಯಮ, 2016 ಹಾಗೂ ಸಂಬಂಧಿತ ಅಧಿನಿಯಮಗಳು 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 2. | ಪ್ರಸ್ತಾವನೆಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಾಗಲೀ / ಲೋಕಾಯುಕ್ತದಲ್ಲಾಗಲೀ ಯಾವುದೇ ವಿಚಾರಣಾ ಪ್ರಾಧಿಕಾರದಲ್ಲಾಗಲೀ ಪ್ರಕರಣ ದಾಖಲಾಗಿದ್ದಲ್ಲಿ ಅರ್ಜಿದಾರರೇ ಬಗೆಹರಿಸಿಕೊಳ್ಳತಕ್ಕದ್ದು. |
| 3. | ವಸತಿ ವಿನ್ಯಾಸ ನಕ್ಷೆಯಲ್ಲಿನ ವಿವಿಧ ಅಳತೆಯ ಒಟ್ಟು 84 ವಸತಿ ನಿವೇಶನಗಳಿದ್ದು, [75 ವಿವಿಧ ಅಳತೆಯ ನಿವೇಶನಗಳು + 9 EWS ನಿವೇಶನಗಳು) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೆ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಒಟ್ಟು ಸಂಖ್ಯೆಯನ್ನು ಅನುಮೋದಿತ ಬಡಾವಣೆ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ. ವಿನ್ಯಾಸದಲ್ಲಿ ಯಾವುದೇ ಬದಲಾವಣೆ ಮಾಡಿ ಮನೆ ಕಟ್ಟಿದ್ದಲ್ಲಿ ಅಕ್ಕೆ ಅರ್ಜಿದಾರರೇ ಹೊಣೆಯಾಗಬೇಕಾಗುತ್ತದೆ. |
| 4. | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 5. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿಗಾಗಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ದಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 6. | ಉದ್ಯಾನವನ ಮತ್ತು ಬಯಲುಜಾಗಗಳನ್ನು ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರಕಾರ ಶೇ 100.ರಷ್ಟು ನಿವೇಶನಗಳ ಬಿಡುಗಡೆ ಕೋರುವ ಮೊದಲು Chain link Fencing ಮಾಡಿ ಹಾಗೂ ಅಭಿವೃದ್ಧಿಪಡಿಸುವುದು. |
| 7. | ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |



Scanned with OKEN Scanner

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಶ್ರೀ.ಪ್ರದೀಪ್ ಕೃಷ್ಣಪ್ಪ ಬಿನ್ ಎಂ. ಕೃಷ್ಣಪ್ಪ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

| | |
|---|---|
| 8. | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಬಡಾವಣೆ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 9. | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ದಾಖಲೆ ಅಥವಾ ಇನ್ನಿತರೆ ಪೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಕೆಟಿಸಿಪಿ ಕಾಯ್ದೆ 1961 ರ ಕಲಂ 17 ರಡಿಯಲ್ಲಿ ಈಗ ನೀಡಿರುವ ಬಡಾವಣೆ ನಕ್ಷೆ ಅನುಮೋದನೆಯು ಕೆಟಿಸಿಪಿ ಕಾಯ್ದೆ 1961 ರ ಕಲಂ 76(O) ರನ್ವಯ ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು ಹಾಗೂ ಈ ಜಮೀನುಗಳಿಗೆ ಸಿವಿಲ್ ವ್ಯಾಜ್ಯಗಳೇನಾದರೂ ಇದ್ದಲ್ಲಿ ಪ್ರಾಧಿಕಾರವು ಜವಾಬ್ದಾರರಾಗಿರುವುದಿಲ್ಲ. |
| 10. | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 11. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ವಸತಿ ಅಭಿವೃದ್ಧಿಗಳಿಂದ ಉತ್ಪಾದನೆಯಾಗುವ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿಗಳಾಗಿ ವಿಂಗಡಿಸಲು ಹಾಗೂ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 12. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವು ಮಾಡಿಕೊಡತಕ್ಕದ್ದು. |
| 13. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 14. | ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17-2ಬಿ ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿದ ನಂತರ, ಸಕ್ಷಮ ಪ್ರಾಧಿಕಾರಗಳಿಂದ ಸಿವಿಲ್, ವಿದ್ಯುತ್, ಒಳಚರಂಡಿ ಮತ್ತು ನೀರು ಸರಬರಾಜು ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಕುರಿತು ಪ್ರಮಾಣ ಪತ್ರಗಳೊಂದಿಗೆ ಕೋರಿಕೆ ಸಲ್ಲಿಸಿದಲ್ಲಿ ಅಂತಿಮ ವಿನ್ಯಾಸವನ್ನು ಮತ್ತು ನಿವೇಶನಗಳನ್ನು ಬಿಡುಗಡೆಗೊಳಿಸಲಾಗುವುದು. |



Scanned with OKEN Scanner

| | |
|---|---|
| 15. | ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 16. | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. |
| 17. | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ / ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದ್ದು. |
| 18. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಒದಗಿಸತಕ್ಕದ್ದು. ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System ಅಳವಡಿಸುವುದು. |
| 19. | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 20. | BESCOM ನಿರ್ದೇಶನದಂತೆ ಬಡಾವಣೆಯಲ್ಲಿ ವಿದ್ಯುತ್ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲು ಕ್ರಮ ಕೈಗೊಳ್ಳತಕ್ಕದ್ದು. |
| 21. | ತಾತ್ಕಾಲಿಕ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2020 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಶನಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು ಆರ್ಥಿಕ ಹಿಂದುಳಿದ ವರ್ಗದವರಿಗಾಗಿ (EWS) ಮತ್ತು ಕಡಿಮೆ ಆದಾಯ ವರ್ಗದವರಿಗಾಗಿ (LIG) ಕಾಯ್ದಿರಿಸಕ್ಕದ್ದು, ಆರ್ಥಿಕ ದುರ್ಬಲ ವರ್ಗದವರಿಗಾಗಿ (EWS) ಕಾಯ್ದಿರಿಸಿದ ನಿವೇಶನಗಳನ್ನು ಒಂದುಗೂಡಿಸಿ ದೊಡ್ಡ ಅಳತೆಯ ನಿವೇಶನವನ್ನಾಗಿ ಸಮಾಮೇಲನಾ ಮಾಡಿದ್ದಲ್ಲಿ ಮೂಲ ಆಶಯ ವಿಫಲವಾಗುವುದರಿಂದ ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ (EWS) ಕಾಯ್ದಿರಿಸಿದ ವಸತಿ ನಿವೇಶನಗಳನ್ನು ಸಮಾಮೇಲನಾ ಮಾಡತಕ್ಕದ್ದಲ್ಲ. |
| 22. | BWSSB/KUWSB, BESCOM ಇಲಾಖೆಗಳಿಂದ ಹಾಗೂ ಅಗತ್ಯಕ್ಕನುಗುಣವಾಗಿ KSPCB ರವರಿಂದ ಹಾಗೂ ಇತರೆ ಸಂಬಂಧಿತ ಇಲಾಖೆಗಳಿಂದ ಕಾಮಗಾರಿ ಮುಕ್ತಾಯ ಪ್ರಮಾಣ ಪತ್ರಗಳನ್ನು ಪಡೆದು ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 23. | ಬಡಾವಣೆ ನಕ್ಷೆಯಲ್ಲಿ Transformer Yard, STP, OHT, SWM ಗಳಿಗಾಗಿ ಸೂಕ್ತ ಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |



Scanned with OKEN Scanner

| | |
|---|---|
| 24. | ಪ್ರಸ್ತುತ ನೀಡಿರುವ ಅನುಮೋದನೆಯಂತೆ ಮೂರು ವರ್ಷಗಳ ಒಳಗಾಗಿ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ ಸಕ್ಷಮ ಪ್ರಾಧಿಕಾರಗಳಿಂದ ದೃಢೀಕರಣ ಪತ್ರಗಳೊಂದಿಗೆ ಅಂತಿಮ ಅನುಮೋದನೆ ಪಡೆಯತಕ್ಕದ್ದು. 3 ವರ್ಷಗಳ ಅವಧಿಯಲ್ಲಿ ಪೂರ್ಣಗೊಳಿಸಲು ಸಾಧ್ಯವಾಗದಿದ್ದಲ್ಲಿ ಅವಧಿ ಪೂರ್ಣಗೊಳ್ಳುವ ಮುನ್ನವೇ ಸಕಾರಣಗಳೊಂದಿಗೆ ಮನವಿ ಸಲ್ಲಿಸಿ, ಒಂದು ವರ್ಷದವರೆಗೆ ಅವಧಿ ವಿಸ್ತರಣೆ ಮಾಡಿಕೊಳ್ಳತಕ್ಕದ್ದು. ಇಲ್ಲವಾದಲ್ಲಿ ನೀಡಿರುವ ಅನುಮೋದನೆಯು ಅನೂರ್ಜಿತವಾಗುತ್ತದೆ. |
| 25. | ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯಂತೆ ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿಪಡಿಸಿದ ನಂತರ ಅಭಿಯಂತರ ವಿಭಾಗದಿಂದ ನಿವೇಶನಗಳ ಖಚಿತ ಅಳತೆಯ ವರದಿ ಪಡೆದ ನಂತರ ಶೇ.100 ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸುವ ಷರತ್ತಿಗೊಳಪಡಿಸಿದೆ. |
| 26. | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಮೇಲ್ಕಂಡ ಷರತ್ತುಗಳಿಗೊಳಪಟ್ಟು, ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 17[2-A] ರಡಿಯಲ್ಲಿ Demarcation and Development ಉದ್ದೇಶಕ್ಕೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ.

ಆಯುಕ್ತರು
ಬೆಂಆಪ್ರಾ, ಬೆಂಗಳೂರು

ಇವರಿಗೆ,

ಶ್ರೀ.ಪ್ರದೀಪ್ ಕೃಷ್ಣಪ್ಪ ಬಿನ್ ಎಂ. ಕೃಷ್ಣಪ್ಪ

ನಂ. 2937/38ಇ, ಸರ್ವೀಸ್ ರಸ್ತೆ,

ವಿಜಯನಗರ,

ಬೆಂಗಳೂರು-560 040

<u>ಪ್ರತಿಯನ್ನು</u>

1. ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ, ಕರ್ನಾಟಕ, [RERA], ಸಿಲ್ವರ್ ಜ್ಯೂಬಿಲಿ ಬ್ಲಾಕ್, 3 ನೇ ಕ್ರಾಸ್ ರಸ್ತೆ, ಸಂಪಂಗಿರಾಮನಗರ, ಬೆಂಗಳೂರು-560 002 ರವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
2. ಅಭಿಯಂತರ ಸದಸ್ಯರು, ಬೆಂಆಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ಅನುಮೋದಿತ ವಿನ್ಯಾಸ ನಕ್ಷೆಯನ್ನು ಮಾಹಿತಿಗಾಗಿ ಕಳುಹಿಸಿದೆ.



Scanned with OKEN Scanner

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ವಾಜರಹಳ್ಳಿ ಗ್ರಾಮದ ಸರ್ವೆ ನಂ.13/1 ರಲ್ಲಿ 2ಎ-05ಗುಂ(0ಎ-01ಗುಂ ಖರಾಬು ಹೊರತುಪಡಿಸಿ)ಸರ್ವೆ ನಂ.13/2 ರಲ್ಲಿ 2ಎ-20ಗುಂ ಒಟ್ಟು 4ಎ-25ಗುಂ ವಿಸ್ತೀರ್ಣದ ಜಮೀನುಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ಕಲಂ 17(2-A) ರ ಅಡಿಯಲ್ಲಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಶ್ರೀ.ಪ್ರದೀಪ್ ಕೃಷ್ಣಪ್ಪ ಬಿನ್ ಎಂ. ಕೃಷ್ಣಪ್ಪ ರವರ ಪರವಾಗಿ ಅನುಮೋದನೆ ನೀಡುವ ಬಗ್ಗೆ.

---

3. ಕಾರ್ಯಪಾಲಕ ಅಭಿಯಂತರರು, [ದಕ್ಷಿಣ ವಿಭಾಗ] ಬನಶಂಕರಿ ಬಿಡಿಎ ಕಾಂಪ್ಲೆಕ್ಸ್, ಬೆಂಅಪ್ರಾ, ಬೆಂಗಳೂರು ರವರಿಗೆ ಅನುಮೋದಿತ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯೊಂದಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸುತ್ತಾ, ತಾತ್ಕಾಲಿಕ ವಿನ್ಯಾಸ ನಕ್ಷೆಯಂತೆಯೇ ಬಡಾವಣೆಯು ಅಭಿವೃದ್ಧಿಯಾಗುತ್ತಿರುವ ಬಗ್ಗೆ ನಿಗಾ ವಹಿಸುವುದು.
4. ಕಂದಾಯ ಅಧಿಕಾರಿಗಳು [ದಕ್ಷಿಣ ವಿಭಾಗ] ಬನಶಂಕರಿ ಬಿಡಿಎ ಕಾಂಪ್ಲೆಕ್ಸ್, ಬೆಂಅಪ್ರಾ, ಬೆಂಗಳೂರು ರವರಿಗೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯೊಂದಿಗೆ ಮಾಹಿತಿಗಾಗಿ ಕಳುಹಿಸಿದೆ.
5. ಸಿಸ್ಟಮ್ ಮ್ಯಾನೇಜರ್, EDP ಶಾಖೆ ರವರಿಗೆ ಕಳುಹಿಸುತ್ತಾ, ಇದರೊಂದಿಗೆ ಲಗತ್ತಿಸಿರುವ ಸಿ.ಡಿ.ಯಲ್ಲಿ ದಾಖಲಿಸಲಾದ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ನೀಲಿ ನಕ್ಷೆ ಮತ್ತು ಕಾರ್ಯಾದೇಶ ಇವುಗಳನ್ನು ಪ್ರಾಧಿಕಾರದ Website ನಲ್ಲಿ ಪ್ರಚುರಪಡಿಸಲು ತಿಳಿಸಲಾಗಿದೆ.

ಸೂಚನೆ : 1. ಸಂಬಂಧಪಟ್ಟ ತಾಂತ್ರಿಕ ವಿಷಯ ನಿರ್ವಾಹಕರು, ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯನ್ನು ಸಿ.ಡಿ. ಯಲ್ಲಿ ದಾಖಲಿಸಿ, ದಾಖಲು ವಿಭಾಗಕ್ಕೆ ನೀಡುವುದು.

2. ಸದರಿ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಯ ವಿವರಗಳನ್ನು, ಕಾರ್ಯಾದೇಶದ ವಹಿಯ ಪುಟ ಸಂಖ್ಯೆ ರಲ್ಲಿ ನಮೂದಿಸಿದೆ.

(signature)
24.9.2024
7760907876



Scanned with OKEN Scanner